ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಕಳೆದ ಒಂದು ವರ್ಷದ ಅವಧಿಯಲ್ಲಿ ಟೋಲ್ ಫೀಸ್ ಮಾಹಿತಿ ಬಗ್ಗೆ

ಡಾ: ಚಂದ್ರಶೇಖರ್ ಬಿ. ಪಾಟೀಲ್(ಪದವೀಧರರ ಕ್ಷೇತ್ರ) -

490 (514) ಮಾನ್ಯ ಉಪ ಮುಖ್ಯಮಂತಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಸರ್ಕಾರಿ ಬಸ್‌ಗಳಿಗೆ ಕಳೆದ ಒಂದು ವರ್ಷದಲ್ಲಿ ಎಷ್ಟು ಹಣ ಟೋಲ್ ಫೀಸ್ ಕಟ್ಟಲಾಗಿದೆ;

(ಆ) ಸಾರಿಗೆ ಇಲಾಖೆಯ ನಾಲ್ಕು ನಿಗಮಗಳು ನಷ್ಟದಲ್ಲಿ ನಡೆಯುತ್ತಿರುವುದು ನಿಜವೇ;

(ಇ) ಇಲಾಖೆಯಲ್ಲಿ ಅಂತರ ನಿಗಮ ವರ್ಗಾವಣೆಗೆ ಅವಕಾಶ ಕಲ್ಪಿಸುವ ಪ್ರಸ್ತಾಪ ಸರ್ಕಾರದ ಪರಿಶೀಲನೆಯಲ್ಲಿದೆಯೇ?

(ಈ) ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ 371ಜೆ ಜಾರಿಯಾದ ಮೇಲೆ ಆ ಭಾಗದಲ್ಲಿ ಎಷ್ಟು ಹುದ್ದೆಗಳನ್ನು ಸಾರಿಗೆ ಇಲಾಖೆಯಲ್ಲಿ ಭರ್ತಿ ಮಾಡಲಾಗಿದೆ ;

(ಉ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು?